# ಕೊಡಗು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕು ನಿಯಮಿತ

**ಜನರಲ್ ತಿಮ್ಮಯ್ಯ ವೃತ್ತ, ಮಡಿಕೇರಿ –571 201**

**E MAIL: kdccbank@yahoo.co.in    Ph: 08272–229691/224805**

**ಸಂ./ಸಿಬ್ಬಂದಿ/ನೇಮಕಾತಿ/ 4461/ 2019–2020**      **ದಿನಾಂಕ : 12.02.2020**

## ಪ್ರಧಾನ ವ್ಯವಸ್ಥಾಪಕರು, ಕಿರಿಯ ಸಹಾಯಕರು, ವಾಹನ ಚಾಲಕರು ಮತ್ತು ಅಟೆಂಡರ್ ಹುದ್ದೆಗಳಿಗೆ ಅರ್ಜಿ ಆಹ್ವಾನ

ಬ್ಯಾಂಕಿನಲ್ಲಿ ಖಾಲಿ ಇರುವ ಈ ಕೆಳಕಂಡ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

| ಕ್ರ ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆಗಳು | ವರ್ಗೀಕರಣ | ಒಳ ಮೀಸಲಾತಿ | | | | | | | |
|---|---|---|---|---|---|---|---|---|---|---|---|
| | | | | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗ ವಿಕಲರು | ಮಾಜಿ ಸೈನಿಕ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ | ಒಟ್ಟು |
| 1 | ಪ್ರಧಾನ ವ್ಯವಸ್ಥಾಪಕರು ( ವೇತನ ಶ್ರೇಣಿ) ರೂ 52650-1250-53900-1450-62600-1650-72500-1900-83900-2200-97100 | 1 | ಸಾಮಾನ್ಯ | 1 | 0 | 0 | 0 | 0 | 0 | 0 | 1 |
| | | | ಒಟ್ಟು | 1 | 0 | 0 | 0 | 0 | 0 | 0 | 1 |
| 2 | ಕಿರಿಯ ಸಹಾಯಕರು ವೇತನ ಶ್ರೇಣಿ ರೂ. 30350-750-32600-850-36000-950-39800-1100-46400-1250-53900-1450-58250 | 26 | ಸಾಮಾನ್ಯ | 3 | 4 | 4 | 1 | 1 | 0 | 0 | 13 |
| | | | ಪರಿಶಿಷ್ಟ ಜಾತಿ | 1 | 1 | 1 | 1 | 0 | 0 | 0 | 04 |
| | | | ಪರಿಶಿಷ್ಟ ಪಂಗಡ | 1 | 0 | 0 | 0 | 0 | 0 | 0 | 01 |
| | | | ಪ್ರ ವರ್ಗ–1 | 1 | 0 | 0 | 0 | 0 | 0 | 0 | 01 |
| | | | ಪ್ರ ವರ್ಗ–2 ಎ | 1 | 1 | 1 | 1 | 0 | 0 | 0 | 04 |
| | | | ಪ್ರ ವರ್ಗ–2 ಬಿ | 1 | 0 | 0 | 0 | 0 | 0 | 0 | 01 |
| | | | ಪ್ರ ವರ್ಗ– 3ಎ | 1 | 0 | 0 | 0 | 0 | 0 | 0 | 01 |
| | | | ಪ್ರ ವರ್ಗ– 3ಬಿ | 1 | 0 | 0 | 0 | 0 | 0 | 0 | 01 |
| | | | ಒಟ್ಟು | 10 | 6 | 6 | 3 | 1 | 0 | 0 | 26 |
| 3 | ವಾಹನ ಚಾಲಕರು ವೇತನ ಶ್ರೇಣಿ ರೂ. 27650-650-29600-750-32600-850-36000-950-39800-1100-46400-1250-52650 | 02 | ಸಾಮಾನ್ಯ | 1 | 0 | 0 | 0 | 0 | 0 | 0 | 1 |
| | | | ಪರಿಶಿಷ್ಟ ಜಾತಿ | 1 | 0 | 0 | 0 | 0 | 0 | 0 | 1 |
| | | | ಪರಿಶಿಷ್ಟ ಪಂಗಡ | 0 | 0 | 0 | 0 | 0 | 0 | 0 | 0 |
| | | | ಪ್ರ ವರ್ಗ–1 | 0 | 0 | 0 | 0 | 0 | 0 | 0 | 0 |
| | | | ಪ್ರ ವರ್ಗ–2 ಎ | 0 | 0 | 0 | 0 | 0 | 0 | 0 | 0 |
| | | | ಪ್ರ ವರ್ಗ–2 ಬಿ | 0 | 0 | 0 | 0 | 0 | 0 | 0 | 0 |
| | | | ಪ್ರ ವರ್ಗ– 3ಎ | 0 | 0 | 0 | 0 | 0 | 0 | 0 | 0 |
| | | | ಪ್ರ ವರ್ಗ– 3ಬಿ | 0 | 0 | 0 | 0 | 0 | 0 | 0 | 0 |
| | | | ಒಟ್ಟು | 2 | 0 | 0 | 0 | 0 | 0 | 0 | 02 |
| 4 | ಅಟೆಂಡರ್ ವೇತನ ಶ್ರೇಣಿ ರೂ. 23500-550-24600-600-27000-650-29600-750-32600-850-36000-950-39800-1100-46400-1250-47650 | 12 | ಸಾಮಾನ್ಯ | 1 | 2 | 2 | 1 | 0 | 0 | 0 | 06 |
| | | | ಪರಿಶಿಷ್ಟ ಜಾತಿ | 1 | 1 | 0 | 0 | 0 | 0 | 0 | 02 |
| | | | ಪರಿಶಿಷ್ಟ ಪಂಗಡ | 1 | 0 | 0 | 0 | 0 | 0 | 0 | 01 |
| | | | ಪ್ರ ವರ್ಗ–1 | 1 | 0 | 0 | 0 | 0 | 0 | 0 | 01 |
| | | | ಪ್ರ ವರ್ಗ–2 ಎ | 1 | 0 | 0 | 0 | 0 | 0 | 0 | 01 |
| | | | ಪ್ರ ವರ್ಗ–2 ಬಿ | 1 | 0 | 0 | 0 | 0 | 0 | 0 | 01 |
| | | | ಪ್ರ ವರ್ಗ– 3ಎ | 0 | 0 | 0 | 0 | 0 | 0 | 0 | 0 |
| | | | ಪ್ರ ವರ್ಗ– 3ಬಿ | 0 | 0 | 0 | 0 | 0 | 0 | 0 | 0 |
| | | | ಒಟ್ಟು | 6 | 3 | 2 | 1 | 0 | 0 | 0 | 12 |

- ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ **26/02/2020** ಮತ್ತು ಶುಲ್ಕ ಪಾವತಿಸಲು ಕಡೆಯ ದಿನಾಂಕ **27/02/2020**
- ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಬ್ಯಾಂಕಿನ ವೆಬ್‌ಸೈಟ್ ವಿಳಾಸ www.kodagudccbank.com ದಲ್ಲಿ ಆನ್‌ಲೈನ್ ಅರ್ಜಿ, ಅರ್ಹತೆಗಳು ಮತ್ತು ಇನ್ನಿತರ ನಿಬಂಧನೆಗಳ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದು.

**ಸಹಿ/**

**ಮುಖ್ಯ ಕಾರ್ಯನಿರ್ವಹಣಾಧಿಕಾರಿ**

## ಆನ್‌ಲೈನ್ ಅರ್ಜಿ, ಅರ್ಹತೆಗಳು ಮತ್ತು ಇನ್ನಿತರ ನಿಬಂಧನೆಗಳು

### 1. ಪ್ರಧಾನ ವ್ಯವಸ್ಥಾಪಕರು:

| ಕ್ರ ಸಂ | ಹುದ್ದೆಯ ಹೆಸರು | ವಿದ್ಯಾರ್ಹತೆ ಮತ್ತು ಇತರೆ ಅರ್ಹತೆಗಳು |
|---|---|---|
| 1 | ಪ್ರಧಾನ ವ್ಯವಸ್ಥಾಪಕರು | 1) ಮಾನ್ಯತೆ ಪಡೆದ ವಿಶ್ವವಿದ್ಯಾನಿಲಯದಿಂದ ಎಂ.ಬಿ.ಎ ಫೈನಾನ್ಸ್ ಅಥವಾ ಎಂ.ಕಾಂ ಸ್ನಾತಕೋತ್ತರ ಪದವಿಯನ್ನು ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾಗಿರಬೇಕು.<br>2) ಸಿಎಐಐಬಿ/ಜೆಎಐಐಬಿ/ಡಿಸಿಬಿಎಂ/ ಹೆಚ್‌ಡಿಸಿಎಂ ಪದವೀಧರರಿಗೆ ಆದ್ಯತೆ ನೀಡಲಾಗುವುದು.<br>3) **ವಯೋಮಿತಿ:** ಕನಿಷ್ಟ 50 ವರ್ಷ ಮತ್ತು ಗರಿಷ್ಟ 60 ವರ್ಷ.<br>4) **ಅನುಭವ:** ಬ್ಯಾಂಕಿನ ಸೇವೆಯಲ್ಲಿ ಕನಿಷ್ಟ 20 ವರ್ಷಗಳ ನಿಷ್ಕಳಂಕ ಸೇವೆ ಸಲ್ಲಿಸಿರಬೇಕು ಹಾಗೂ ಅಧಿಕಾರಿ ಹುದ್ದೆಯಲ್ಲಿ ಕನಿಷ್ಟ 5 ವರ್ಷಗಳ ಸೇವೆ ಸಲ್ಲಿಸಿರಬೇಕು.<br>5) ಕಂಪ್ಯೂಟರ್ ಜ್ಞಾನ ಹೊಂದಿರಬೇಕು.<br>6) ಆಯ್ಕೆ ವಿಧಾನ: ಲಿಖಿತ ಪರೀಕ್ಷೆ ಮತ್ತು ಸಂದರ್ಶನದ ಮೂಲಕ<br>7) ಲಿಖಿತ ಪರೀಕ್ಷೆ ವಿಷಯಗಳು: ಕನ್ನಡ ಭಾಷೆಗಾಗಿ– 50 ಅಂಕಗಳು, ಸಾಮಾನ್ಯ ಇಂಗ್ಲೀಷ್‌ಗಾಗಿ –25 ಅಂಗಳು, ಸಾಮಾನ್ಯ ಜ್ಞಾನಕ್ಕಾಗಿ –25 ಅಂಕಗಳು, ಸಹಕಾರಿ ವಿಷಯಕ್ಕಾಗಿ–50 ಅಂಕಗಳು, ಭಾರತ ಸಂವಿಧಾನಕ್ಕೆ –25 ಅಂಕಗಳು ಹಾಗೂ ಸಂಘದ ಉದ್ದೇಶ ಮತ್ತು ಕಾರ್ಯ ಚಟುವಟಿಕೆ ವಿಷಯಗಳಿಗೆ–25 ಅಂಕಗಳು ಒಳಗೊಂಡಿರುತ್ತದೆ.<br>8) ಕನ್ನಡ ಮತ್ತು ಇಂಗ್ಲೀಷ್ ಭಾಷೆಯ ಜ್ಞಾನ ಹೊಂದಿರತಕ್ಕದ್ದು<br>9) ಅರ್ಜಿಯನ್ನು ಬ್ಯಾಂಕಿನ ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮುಖಾಂತರ ಸಲ್ಲಿಸಬೇಕು.<br>10) ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಭರ್ತಿ ಮಾಡಿ ರೂ 1500/– ಸ್ಥಳೀಯ ಅಂಚೆಕಛೇರಿಯಲ್ಲಿ ಪಾವತಿಸಿ ಚಲನ್‌ನ್ನು ಆನ್‌ಲೈನ್ ಮುಖಾಂತರ ಅಪ್‌ಲೋಡ್ ಮಾಡುವುದು. |

### 2. ಕಿರಿಯ ಸಹಾಯಕರು, ವಾಹನ ಚಾಲಕರು ಮತ್ತು ಅಟೆಂಡರ್:

| ಕ್ರ ಸಂ | ಹುದ್ದೆಯ ಹೆಸರು | ವಿದ್ಯಾರ್ಹತೆ ಮತ್ತು ಇತರೆ ಅರ್ಹತೆಗಳು |
|---|---|---|
| 1 | ಕಿರಿಯ ಸಹಾಯಕರು | 1) ಮಾನ್ಯತೆ ಪಡೆದ ವಿಶ್ವವಿದ್ಯಾನಿಲಯದಿಂದ ಶೇ 55% ಕನಿಷ್ಟ ಅಂಕಗಳಿಕೆಯ ವಾಣಿಜ್ಯೇತರ ಪದವಿ ಅಥವಾ ಶೇ 50 ಕನಿಷ್ಟ ಅಂಕಗಳಿಕೆಯ ವಾಣಿಜ್ಯ ಪದವಿ.<br>2) ಕನಿಷ್ಟ 6 ತಿಂಗಳು ಕಡಿಮೆ ಇಲ್ಲದ ಡಿಪ್ಲೊಮೋ ಇನ್ ಕಂಪ್ಯೂಟರ್ ಆಪರೇಷನ್ ಮತ್ತು ಅಪ್ಲಿಕೇಶನ್ಸ್ ಸರ್ಟಿಫಿಕೇಟ್ ಕೋರ್ಸ್ ಮಾಡಿರತಕ್ಕದ್ದು. |
| 2 | ವಾಹನ ಚಾಲಕರು | 1) ಕನ್ನಡವನ್ನು ಒಂದು ಭಾಷೆಯಾಗಿ ಅಭ್ಯಸಿಸಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು.<br>2) ಅಧಿಕೃತ ಡ್ರೈವಿಂಗ್ ಲೈಸನ್ಸ್ ಹೊಂದಿರಬೇಕು. (ಲಘು ಮೋಟಾರು ವಾಹನ)<br>3) ವಾಹನ ಚಾಲನೆಯಲ್ಲಿ 05 ವರ್ಷ ಅನುಭವವಿರುವವರಿಗೆ ಆದ್ಯತೆ ನೀಡಲಾಗುವುದು. |
| 3 | ಅಟೆಂಡರ್ | 1) ಕನ್ನಡವನ್ನು ಒಂದು ಭಾಷೆಯಾಗಿ ಅಭ್ಯಸಿಸಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು. |

**I. ವಯೋಮಿತಿ:**

ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಲಾದ ಕೊನೆಯ ದಿನಾಂಕಕ್ಕೆ ಕನಿಷ್ಟ 18 ವರ್ಷಗಳು ಹಾಗೂ ಗರಿಷ್ಟ ಸಾಮಾನ್ಯ ವರ್ಗಕ್ಕೆ–35 ವರ್ಷಗಳು, ಪ್ರ ವರ್ಗ–2ಎ, 2ಬಿ, 3ಎ, 3ಬಿ ವರ್ಗಗಳಿಗೆ–38 ವರ್ಷಗಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–1 ವರ್ಗಗಳಿಗೆ –40 ವರ್ಷಗಳು ಹಾಗೂ ಸರ್ಕಾರಿ ಆದೇಶದ ಅನುಸಾರ ಅಂಗವಿಕಲರು ಮತ್ತು ವಿಧವೆಯರಿಗೆ 10 ವರ್ಷ ಮತ್ತು ಮಾಜಿ ಸೈನಿಕರಿಗೆ ನಿಯಮಾನುಸಾರ ವಯೋಮಿತಿ ಸಡಿಲಿಕೆ ಇರುತ್ತದೆ.

**ii. ಆಯ್ಕೆ ವಿಧಾನ:**

ಲಿಖಿತ ಪರೀಕ್ಷೆ ಹಾಗೂ ಸಂದರ್ಶನದ ಮೂಲಕ

1. **ಕಿರಿಯ ಸಹಾಯಕರ ಹುದ್ದೆಗೆ:**

   200 ಅಂಕಗಳ ಲಿಖಿತ ಪರೀಕ್ಷೆಯಿದ್ದು, ಕನ್ನಡ ಭಾಷೆಗಾಗಿ– 50 ಅಂಕಗಳು, ಸಾಮಾನ್ಯ ಇಂಗ್ಲೀಷ್‌ಗಾಗಿ –25 ಅಂಕಗಳು, ಸಾಮಾನ್ಯ ಜ್ಞಾನಕ್ಕಾಗಿ –25 ಅಂಕಗಳು, ಸಹಕಾರಿ ವಿಷಯಕ್ಕಾಗಿ–50 ಅಂಕಗಳು, ಭಾರತ ಸಂವಿಧಾನಕ್ಕೆ –25 ಅಂಕಗಳು ಹಾಗೂ ಸಂಘದ ಉದ್ದೇಶ ಮತ್ತು ಕಾರ್ಯ ಚಟುವಟಿಕೆ ವಿಷಯಗಳಿಗೆ–25 ಅಂಕಗಳು ಒಳಗೊಂಡಿರುತ್ತದೆ.

2. **ವಾಹನ ಚಾಲಕರು ಮತ್ತು ಅಟೆಂಡರ್ ಹುದ್ದೆಗೆ:**

   ಅರ್ಹತಾ ಪರೀಕ್ಷೆಯಲ್ಲಿ (ಎಸ್,ಎಸ್,ಎಲ್.ಸಿ.) ಪಡೆಯಲಾದ ಅಂಕಗಳನ್ನು ಪರಿಗಣಿಸಿ, ಪಡೆಯಲಾದ ಅಂಕಗಳ ಶೇಕಡವಾರು ಆಧಾರದ ಮೇಲೆ 1:5 ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು. ಅರ್ಹತಾ ಪರೀಕ್ಷೆ (ಎಸ್.ಎಸ್.ಎಲ್.ಸಿ)ಯಲ್ಲಿ ಪಡೆದ ಅಂಕಗಳನ್ನು ಶೇ 85 ಕ್ಕೆ ಪರಿವರ್ತಿಸಿ ಸಂದರ್ಶನದ ಶೇ 15 ರನ್ನು ಒಟ್ಟು ಸೇರಿಸಿ ರ್‍ಯಾಂಕಿಂಗ್ ಆಧಾರದಲ್ಲಿ ಆಯ್ಕೆ ಮಾಡಲಾಗುವುದು.

ವಾಹನ ಚಾಲಕರು ಮತ್ತು ಅಟೆಂಡರ್ ಹುದ್ದೆಗೆ ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಕನ್ನಡ ಓದು ಮತ್ತು ಬರಹದ ಜ್ಞಾನವನ್ನು ತಿಳಿದುಕೊಳ್ಳಲು ಬ್ಯಾಂಕಿನಿಂದ ಕನ್ನಡ ಭಾಷೆಗಾಗಿ 50 ಅಂಕಗಳ ಮತ್ತು ಸಾಮಾನ್ಯ ಜ್ಞಾನದ 50 ಅಂಕಗಳ ಒಟ್ಟು 100 ಅಂಕಗಳ ಲಿಖಿತ ಪರೀಕ್ಷೆ ನಡೆಸಲಾಗುವುದು.

**iii. ನಿಬಂಧನೆಗಳು:**

1) ಅರ್ಜಿಯನ್ನು ಬ್ಯಾಂಕಿನ ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮುಖಾಂತರ ಸಲ್ಲಿಸಬೇಕು.
2) ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಭರ್ತಿ ಮಾಡಿ ಸಾಮಾನ್ಯ ಮತ್ತು ಇತರೆ ಹಿಂದುಳಿದ ಅಭ್ಯರ್ಥಿಗಳಾದಲ್ಲಿ ರೂ 1500/– ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಮಹಿಳೆಯರು ಮತ್ತು ಅಂಗವಿಕಲರಿಗೆ ರೂ 1000/– ಗಳನ್ನು (ಅಂಚೆ ವೆಚ್ಚ ಪ್ರತ್ಯೇಕ) ಸ್ಥಳೀಯ ಅಂಚೆಕಛೇರಿಯಲ್ಲಿ ಪಾವತಿಸಿ ಚಲನ್‌ನನ್ನು ಆನ್‌ಲೈನ್ ಮುಖಾಂತರ ಅಪ್‌ಲೋಡ್ ಮಾಡುವುದು.
3) ಹುದ್ದೆಗಳಿಗೆ ಸಂಬಂಧಿಸಿದಂತೆ, ಮೀಸಲಾತಿ ಕೋರ ಬಯಸುವ ಅಭ್ಯರ್ಥಿಗಳು ಸರ್ಕಾರದ ವಿವಿಧ ಇಲಾಖೆಗಳು ನೇಮಕಾತಿಗಾಗಿ ನಿಗದಿಪಡಿಸಿರುವ ನಮೂನೆಗಳಲ್ಲಿ ಹಾಗೂ ಚಾಲ್ತಿಯಲ್ಲಿರುವ ಅಗತ್ಯ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ಇರುವ ಕೊನೆಯ ದಿನಾಂಕದ ಒಳಗೆ ಪಡೆದಿರತಕ್ಕದ್ದು. ನಂತರ ಪಡೆದ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.
   ಪ್ರಮಾಣಪತ್ರಗಳನ್ನು ನೇಮಕಾತಿ ಸಂದರ್ಶನದ ವೇಳೆ ಪರಿಶೀಲಿಸಲಾಗುವುದು.
   **ಅ) ಅಂಗವಿಕಲ ಅಭ್ಯರ್ಥಿಗಳು:** ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 50 ಎಸ್‌ಆರ್‌ಆರ್ 2000 ದಿನಾಂಕ 03.09.2005 ರ ಆದೇಶದಲ್ಲಿ ತಿಳಿಸಿರುವಂತೆ ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರಗಳನ್ನು ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ:ಸಿಆಸುಇ 115 ಸೆನೆನಿ 2005 ದಿನಾಂಕ 19/11/2005 ರಲ್ಲಿ ನಿಗಧಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರಮಾಣ ಪತ್ರದ ಧೃಢೀಕೃತ ಪ್ರತಿಯನ್ನು ಅರ್ಜಿ ಸಲ್ಲಿಸಲು ಇರುವ ಕೊನೆಯ ದಿನಾಂಕದ ಒಳಗೆ ಪಡೆದಿರತಕ್ಕದ್ದು.
   **ಆ) ಗ್ರಾಮೀಣ ಅಭ್ಯರ್ಥಿ:** ಗ್ರಾಮೀಣ ಮೀಸಲಾತಿ ಕೋರುವ ಅಭ್ಯರ್ಥಿಗಳು ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರವನ್ನು ಶಾಲಾ ಮುಖ್ಯೋಪಾಧ್ಯಾಯರ ಸಹಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು ಪಡೆದು ಪ್ರತಿಯನ್ನು ಅರ್ಜಿ ಸಲ್ಲಿಸಲು ಇರುವ ಕೊನೆಯ ದಿನಾಂಕದ ಒಳಗೆ ಪಡೆದಿರತಕ್ಕದ್ದು. ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಕೋರಲು ಇಚ್ಚಿಸಿದಲ್ಲಿ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ಇರುವ ಕೊನೆಯ ದಿನಾಂಕದ ಒಳಗೆ ಸಕ್ಷಮ ಪ್ರಾಧಿಕಾರದಿಂದ ಪಡೆದಿರತಕ್ಕದ್ದು.
   **ಇ) ಮಾಜಿ ಸೈನಿಕ ಅಭ್ಯರ್ಥಿ:** ಮಾಜಿ ಸೈನಿಕ ಅಂದರೆ ಭೂದಳ, ನೌಕಾದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಇವರು ಸರ್ಕಾರದ ಜಾರಿಯಲ್ಲಿರುವ ನಿಯಮಗಳನ್ವಯ ಮಾಜಿ ಸೈನಿಕ ಅಭ್ಯರ್ಥಿ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ಇರುವ ಕೊನೆಯ ದಿನಾಂಕದ ಒಳಗೆ ಪಡೆದಿರತಕ್ಕದ್ದು.
4) ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್.ಎಸ್.ಎಲ್.ಸಿ ಅಂಕಪಟ್ಟಿ ಸಲ್ಲಿಸತಕ್ಕದ್ದು.
5) ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕಪಟ್ಟಿಗಳು, ಪ್ರಮಾಣ ಪತ್ರಗಳು, ಎಲ್ಲಾ ವರ್ಷಗಳ/ಸೆಮಿಸ್ಟರ್‌ಗಳ ಅಂಕಗಳನ್ನು, ಒಟ್ಟು ಪಡೆದ ಅಂಕಗಳನ್ನು ಮತ್ತು ಶೇಕಡವಾರು ಅಂಕಗಳನ್ನು ಆನ್‌ಲೈನ್‌ನಲ್ಲಿ ಸಲ್ಲಿಸಬೇಕು. ಅಂಕಪಟ್ಟಿಗಳನ್ನು ಸಂದರ್ಶನ ವೇಳೆಯಲ್ಲಿ ಹಾಜರುಪಡಿಸಬೇಕು.
6) ಲಿಖಿತ ಪರೀಕ್ಷೆ/ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.ಲಿಖಿತ ಪರೀಕ್ಷೆಗೆ ದಿನಾಂಕ, ವೇಳೆ ಮತ್ತು ಸ್ಥಳದ ವಿವರಗಳನ್ನು ಪ್ರತ್ಯೇಕವಾಗಿ ತಿಳಿಸಲಾಗುವುದು.
7) ವಿದ್ಯಾರ್ಹತೆಗೆ ಸಂಬಂಧಿಸಿದ ಎಲ್ಲಾ ವರ್ಷಗಳ ಅಂಕಪಟ್ಟಿಗಳು, ಪ್ರಮಾಣ ಪತ್ರಗಳು, ಮೀಸಲಾತಿ/ ಒಳಮೀಸಲಾತಿ, ಅನುಭವ ಪತ್ರದ ದಾಖಲಾತಿಗಳನ್ನು ಸ್ವಯಂ ದೃಢೀಕರಿಸಿ ಅಪ್‌ಲೋಡ್ ಮಾಡತಕ್ಕದ್ದು.
8) ಅಭ್ಯರ್ಥಿಗಳಿಗೆ ಕನ್ನಡ ಭಾಷೆಯ ಜ್ಞಾನ(ಓದಲು ಮತ್ತು ಬರೆಯಲು) ಕಡ್ಡಾಯವಾಗಿರುತ್ತದೆ.
9) ಅಭ್ಯರ್ಥಿಗಳು ಈಗಾಗಲೇ ಯಾವುದಾದರೂ ಸಂಸ್ಥೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದಲ್ಲಿ ಅಂತಹ ಸಂಸ್ಥೆಯ ಮುಖ್ಯಸ್ಥರ ಅನುಮತಿಯೊಂದಿಗೆ ಅರ್ಜಿ ಸಲ್ಲಿಸತಕ್ಕದ್ದು.
10) ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿ ಯಾವುದೇ ಕಾರಣವನ್ನು ನೀಡದೇ ರದ್ದುಗೊಳಿಸುವ ಅಥವಾ ಮುಂದೂಡುವ ಅಧಿಕಾರವನ್ನು ಬ್ಯಾಂಕು ಹೊಂದಿರುತ್ತದೆ.
11) ನೇಮಕಾತಿಯಾದ ಅಭ್ಯರ್ಥಿಗಳ ಪರೀಕ್ಷಣಾವಧಿ(ಪ್ರೊಬೆಷನರಿ) ಎರಡು ವರ್ಷಗಳ ಅವಧಿಯಾಗಿರುತ್ತದೆ. ಇದನ್ನು ವಿಸ್ತರಿಸುವ ಅಧಿಕಾರ ಬ್ಯಾಂಕಿನ ಆಡಳಿತ ಮಂಡಳಿ ಕಾಯ್ದಿರಿಸಿದೆ.

**–ಸಹಿ–**

**ಸದಸ್ಯ ಕಾರ್ಯದರ್ಶಿ ಹಾಗೂ**

**ಮುಖ್ಯಕಾರ್ಯನಿರ್ವಾಹಣಾಧಿಕಾರಿ,**

**ಕೊಡಗು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ.**

**ಮಡಿಕೇರಿ**

**ಅರ್ಜಿ ಅಪ್‌ಲೋಡ್‌ಗೆ ಸಂಬಂಧಿಸಿದಂತೆ**

- ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡಲು ಆನ್‌ಲೈನ್ ನಲ್ಲಿ ನೀಡಿರುವ ಸೂಚನೆಗಳನ್ನು ತಪ್ಪದೇ ಪಾಲಿಸುವುದು.
- ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹವರ ಅರ್ಜಿಯನ್ನು ತಿರಸ್ಕರಿಸಲಾಗುವುದು.
- ನಿಗದಿತ ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸದಲ್ಲಿ ಅಂತಹ ಅಭ್ಯರ್ಥಿಗಳು ಈಗಾಗಲೇ ನೊಂದಣಿ ಮಾಡಿರುವ ನೊಂದಣಿ ಸಂಖ್ಯೆಯಡಿಯಲ್ಲಿಯೇ ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಶುಲ್ಕವನ್ನು ಪಾವತಿಸಿ, ಪ್ರತ್ಯೇಕವಾಗಿ ಅರ್ಜಿ ಸಲ್ಲಿಸತಕ್ಕದ್ದು.
- ಅರ್ಜಿ ಶುಲ್ಕವನ್ನು ಪಾವತಿಸುವುದಕ್ಕೆ ಕರ್ನಾಟಕ ರಾಜ್ಯದಲ್ಲಿನ ಯಾವುದೇ ವಿದ್ಯುನ್ಮಾನ ಪಾವತಿ (ಇ–ಪೇಮೆಂಟ್) ಅಂಚೆ ಕಚೇರಿಗೆ ತೆರಳಿ ನಿಗದಿತ ಶುಲ್ಕ + ಅಂಚೆ ಕಛೇರಿ ಶುಲ್ಕ ಪ್ರತ್ಯೇಕ ಪಾವತಿ ಮಾಡತಕ್ಕದ್ದು.
- ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕವಾದ **27–02–2020** ರ ನಂತರ ಶುಲ್ಕವನ್ನು ಸಂದಾಯ ಮಾಡಿದ್ದಲ್ಲಿ, ಅಂತಹವರ ಅರ್ಜಿಯನ್ನು ತಿರಸ್ಕರಿಸಲಾಗುವುದು. ಡಿ.ಡಿ./ಚೆಕ್/ಪೋಸ್ಟಲ್ ಆರ್ಡರ್/ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.
- ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.
- ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇತರೇ ಯಾವುದೇ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.
- ಅರ್ಜಿಗಳನ್ನು ಭರ್ತಿ ಮಾಡಲು ಮತ್ತು ಶುಲ್ಕ ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ, ಆ ಮುಂದಿನ ಕೆಲಸದ ದಿನವು ಅರ್ಜಿಗಳನ್ನು ಭರ್ತಿ ಮತ್ತು ಶುಲ್ಕ ಪಾವತಿಸಲು ಕೊನೆಯ ದಿನಾಂಕವಾಗುವುದು.

1. ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ : **12–02–2020**
2. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : **26–02–2020**
3. ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ : **27–02–2020**
   (ಅಂಚೆ ಕಛೇರಿಯ ಕಾರ್ಯ ವೇಳೆಯೊಳಗೆ ಮಾತ್ರ)

ಅರ್ಜಿಗಳನ್ನು ಆನ್‌ಲೈನ್ ಮೂಲಕ ಭರ್ತಿ ಮಾಡಿ ಅರ್ಜಿ ಶುಲ್ಕವನ್ನು ಅಂಚೆ ಕಛೇರಿಯ ಕೆಲಸದ ವೇಳೆಯೊಳಗೆ ಕರ್ನಾಟಕ ರಾಜ್ಯದ ಯಾವುದೇ ಎಲೆಕ್ಟ್ರಾನಿಕ್ ಅಂಚೆ ಕಛೇರಿಗಳಲ್ಲಿ (e-Payment post offices only) ಮಾತ್ರ ಸಂದಾಯ ಮಾಡಬಹುದಾಗಿರುತ್ತದೆ.

4. **ಸಾಮಾನ್ಯ ನಿಬಂಧನೆಗಳು :**

ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನೇಮಕಾತಿ ಪ್ರಕಟಣೆಯಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರಲೇಬೇಕು.

ಅರ್ಜಿಯಲ್ಲಿ ನಮೂದಿಸಿದ ಅಂಕಪಟ್ಟಿ / ಇತರೆ ದಾಖಲಾತಿಗಳಲ್ಲಿ ಯಾವುದೇ ವ್ಯತ್ಯಾಸ ಕಂಡುಬಂದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ಈ ನೇಮಕಾತಿ ಪ್ರಕಟಣೆಯನ್ನು ಯಾವುದೇ ಕಾರಣ ನೀಡದೆ ಯಾವುದೇ ಹಂತದಲ್ಲಿ ಹಿಂದಕ್ಕೆ ಪಡೆಯುವ / ರದ್ದುಪಡಿಸುವ ಅಧಿಕಾರವನ್ನು ಬ್ಯಾಂಕು ಹೊಂದಿರುತ್ತದೆ.

ಸೇವಾನುಭವ ದೃಢೀಕರಣ ಪತ್ರವನ್ನು ಸಲ್ಲಿಸುವವರು ಉದ್ಯೋಗದಾತರಿಂದ ಪಡೆದ ಸೇವಾ ದೃಢೀಕರಣ ಪತ್ರವನ್ನು ಅರ್ಜಿ ಸಲ್ಲಿಸುವಾಗಲೇ ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಬೇಕು.

5. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.

**ಹಂತ 1 :** ಅಭ್ಯರ್ಥಿಗಳು ಒಕ್ಕೂಟದ ಅಧಿಕೃತ ವೆಬ್‌ಸೈಟ್ www.kodagudcc.bank.com ಮೂಲಕ ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡುವ ಪೂರ್ವದಲ್ಲಿ ಅಧಿಸೂಚನೆ ಮತ್ತು ಸೂಚನೆಗಳನ್ನು ಕಡ್ಡಾಯವಾಗಿ ಓದಿ ಮುಂದುವರಿಯುವುದು.

**ಹಂತ 2 :** REGISTER HERE TO CREATE AN ACCOUNT ಮೇಲೆ ಒತ್ತಿ ಮುಂದುವರೆಯಿರಿ, ರಿಜಿಸ್ಟ್ರೇಷನ್ ಪುಟವು ತೆರೆದುಕೊಳ್ಳುತ್ತದೆ. ಇಲ್ಲಿ ಎಲ್ಲಾ ಮಾಹಿತಿಯನ್ನ ಸರಿಯಾಗಿ ತುಂಬಿದ ನಂತರ REGISTER ಗುಂಡಿಯನ್ನು ಒತ್ತಿ. ನಿಮ್ಮ ಮೊಬೈಲ್‌ಗೆ ಒಂದು ಓಟಿಪಿ ಬರುತ್ತದೆ. ಈ ಓಟಿಪಿ ಉಪಯೋಗಿಸಿಕೊಂಡು ALREADY HAVE AN ACCOUNT? SIGN-IN HERE TO FILL THE APPLICATION ಗುಂಡಿಯನ್ನು ಒತ್ತಿ ಲಾಗಿನ್ ಮಾಡಿರಿ.

**ಹಂತ 3 :** ನಂತರ ಬರುವ ಪುಟದಲ್ಲಿ ನಿಮ್ಮ ವೈಯಕ್ತಿಕ ಮಹಿತಿಯನ್ನು ತುಂಬಿರಿ, ಈ ಪುಟದಲ್ಲಿರುವ ಎಲ್ಲಾ ಮಾಹಿತಿಯನ್ನು ಖಾಲಿ ಬಿಡದಂತೆ ತುಂಬಬೇಕು. ಹಾಗೆ ತುಂಬಿದ ನಂತರ NEXT ಗುಂಡಿಯನ್ನು ಒತ್ತಿ.

**ವಿಶೇಷ ಸೂಚನೆ:**

ಒಮ್ಮೆ NEXT ಗುಂಡಿಯನ್ನು ಒತ್ತಿ ಮುಂದುವರಿದ ನಂತರ ನಿಮ್ಮ ವೈಯಕ್ತಿಕ ಮಹಿತಿಯನ್ನು

ಬದಲಾಯಿಸಲು ಸಾಧ್ಯವಿರುವುದಿಲ್ಲ. ಅದುದರಿಂದ ನಮೂದಿಸಿದ ವಿವರಗಳನ್ನು ಮತ್ತೊಮ್ಮೆ ಕೂಲಂಕುಷವಾಗಿ ಪರಿಶೀಲಿಸಿಕೊಂಡು, ಎಲ್ಲಾ ವಿವರಗಳು ಸರಿಯಾಗಿರುತ್ತವೆಯೆಂದು ಖಚಿತಪಡಿಸಿಕೊಂಡ ನಂತರ NEXT ಗುಂಡಿಯನ್ನು ಒತ್ತಿ ಮುಂದುವರೆಯಿರಿ.

**ಹಂತ 4 :** ಸಂಬಂಧಪಟ್ಟ ಹುದ್ದೆಯನ್ನು ಆಯ್ಕೆ ಮಾಡಿ APPLY ಗುಂಡಿಯನ್ನು ಒತ್ತಿ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ಅರ್ಜಿಯನ್ನು ಭರ್ತಿ ಮಾಡಿದ ನಂತರ ನಮೂದಿಸಿದ ವಿವರಗಳನ್ನು ಮತ್ತೊಮ್ಮೆ ಕೂಲಂಕುಷವಾಗಿ ಪರಿಶೀಲಿಸಿಕೊಂಡು, ಎಲ್ಲಾ ವಿವರಗಳು ಸರಿಯಾಗಿರುತ್ತವೆಯೆಂದು ಖಚಿತಪಡಿಸಿಕೊಂಡ ನಂತರ CONTINUE TO UPLOAD THE DOCUMENTS ಗುಂಡಿಯನ್ನು ಒತ್ತಿ ಮುಂದುವರೆಯಿರಿ.

**ಹಂತ 5 :** ನಂತರ ಬರುವ ದಾಖಲಾತಿ ಅಪಲೋಡ್ ಪಾರಂನಲ್ಲಿ ಅಭ್ಯರ್ಥಿಗಳು ಸಂಬಂಧಪಟ್ಟ ವಿದ್ಯಾರ್ಹತೆ, ಸೇವಾನುಭವ, ಮೀಸಲಾತಿ ಅಂದರೆ ಜಾತಿ ಪ್ರಮಾಣ ಪತ್ರ, ಅಂಗವಿಕಲ ದೃಢೀಕರಣ ಪತ್ರ, ಮಾಜಿ ಸೈನಿಕ, ಗ್ರಾಮೀಣ ಪ್ರಮಾಣಪತ್ರ, ವಯೋಮಿತಿ ಪ್ರಮಾಣ ಪತ್ರದ ಝುರಾಕ್ಸ್ ಪ್ರತಿಗಳಿಗೆ ಸ್ವಯಂ ದೃಢೀಕರಿಸಿ ಸಂಬಂಧಪಟ್ಟ ಎಲ್ಲಾ ಪ್ರಮಾಣ ಪತ್ರಗಳನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡತಕ್ಕದ್ದು.

**ವಿಶೇಷ ಸೂಚನೆ : ಅಪೂರ್ಣವಾಗಿರುವ, ಫೋಟೋ ಮತ್ತು ಅಭ್ಯರ್ಥಿಯು ಸಹಿ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

**ಮೊಬೈಲ್ ಕ್ಯಾಮರ ಸಹಾಯದಿಂದ ಸೆರೆಹಿಡಿದ / ಸ್ಪಷ್ಟತೆ ಇಲ್ಲದಿರುವ ದಾಖಲಾತಿಗಳನ್ನು ಅಪಲೋಡ್ ಮಾಡಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

**ಹಂತ 6 :** ಸೇವಾನುಭವ ದೃಢೀಕರಣ ಪತ್ರವನ್ನು ಸಲ್ಲಿಸುವವರು ಉದ್ಯೋಗದಾತರಿಂದ ಪಡೆದ ಸೇವಾ ದೃಡೀಕರಣ ಪತ್ರವನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡತಕ್ಕದ್ದು.

**ಹಂತ 7 :** ನಂತರ ಅರ್ಜಿ ಶುಲ್ಕವನ್ನು ಪಾವತಿಸುವುದಕ್ಕೆ Generate challan ಗುಂಡಿಯನ್ನು ಒತ್ತಿ Challan ಪ್ರತಿಯನ್ನು Download ಮಾಡಿಕೊಂಡು ಕರ್ನಾಟಕ ರಾಜ್ಯದಲ್ಲಿನ ಯಾವುದೇ ಇ–ಪಾವತಿ ಅಂಚೆ ಕಛೇರಿಗೆ ಹೋಗಿ, ನಿಗದಿತ ಅರ್ಜಿ ಶುಲ್ಕ + ಅಂಚೆ ಕಛೇರಿ ಶುಲ್ಕ ವನ್ನು ಪಾವತಿ ಮಾಡಿ ಅಂತಿಮವಾಗಿ ಪೋಸ್ಟ್ ಆಫೀಸ್ ರಶೀದಿಯ ಮಾಹಿತಿಯನ್ನು ಹಾಗೂ ರಶೀದಿಯ ಸ್ಕ್ಯಾನ್ ಕಾಪಿಯನ್ನು ಪಾವತಿ ವಿವರದೊಂದಿಗೆ ಅಪ್ ಲೋಡ್ ಮಾಡಿ ದೃಢಪಡಿಸಿಕೊಳ್ಳುವುದು.

ಅರ್ಜಿಯ'ನ್ನು ಪಡೆಯಲು Download ಗುಂಡಿಯನ್ನು ಒತ್ತಿ, ಅಭ್ಯರ್ಥಿಗಳು ಅರ್ಜಿಯ ಪ್ರತಿಯನ್ನು ಕಡ್ಡಾಯವಾಗಿ Download ಮಾಡಿಕೊಳ್ಳತಕ್ಕದ್ದು. ಒಕ್ಕೂಟವು ಅಪೇಕ್ಷಿಸಿದಾಗ ಈ ಪ್ರತಿಯನ್ನು ಹಾಜರುಪಡಿಸಬೇಕು.

**ಹಂತ 8 :**

**ಸೂಚನೆ : ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ 27–02–2020 ರ ನಂತರ ಶುಲ್ಕವನ್ನು ಸಂದಾಯ ಮಾಡಲು ಅವಕಾಶವಿರುವುದಿಲ್ಲ. ಡಿ.ಡಿ., ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ನಿಗದಿತ ಶುಲ್ಕ ಸಂದಾಯ ಮಾಡದ ಅಭ್ಯರ್ಥಿಗಳ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.**

ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣಪತ್ರಗಳ ಸ್ವಯಂ ದೃಢೀಕರಿಸಿ ಅಪ್‌ಲೋಡ್ ಮಾಡತಕ್ಕದ್ದು. ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು / ದಾಖಲಾತಿಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಅಂದರೆ, ದಿನಾಂಕ **26–02–2020** ರೊಳಗೆ ಪಡೆದಿರಬೇಕು ಇಲ್ಲವೇ ಸಿಂಧುವಾಗಿರಬೇಕು ಹಾಗೂ ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಪ್ರಮಾಣಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ, ಕೆಳಕಂಡಂತೆ ಕ್ರಮ ಕೈಗೊಳ್ಳಲಾಗುವುದು.

1. ಕಡ್ಡಾಯವಾಗಿ ಹಾಜರುಪಡಿಸಬೇಕಾದ ವಿದ್ಯಾರ್ಹತೆ/ಅನುಭವ/ಜನ್ಮ ದಿನಾಂಕ ಹಾಗೂ ಅಗತ್ಯ ಪ್ರಮಾಣ ಪತ್ರಗಳನ್ನು ಹಾಜರುಪಡಿಸದಿದ್ದಲ್ಲಿ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.
2. ವಿವಿಧ ಮೀಸಲಾತಿ ಕೋರಿ ಹಾಜರು ಪಡಿಸಬೇಕಾದ ಪ್ರಮಾಣಪತ್ರಗಳನ್ನು ಹಾಜರುಪಡಿಸದಿದ್ದಲ್ಲಿ, ಆ ಮೀಸಲಾತಿಯನ್ನು ರದ್ದುಪಡಿಸಿ ಸಾಮಾನ್ಯ ಅರ್ಹತೆಯಲ್ಲಿ ಅರ್ಹತೆಯನ್ನು ಹೊಂದಿದ್ದಲ್ಲಿ ಮಾತ್ರ, ಸಾಮಾನ್ಯ ಅರ್ಹತೆ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.

**<u>ಮೌಖಿಕ ಸಂದರ್ಶನದ ವೇಳೆ / ಯಾವುದೇ ಸಂದರ್ಭದಲ್ಲಿ ಪರಿಶೀಲನೆಗೆ ಸೂಚಿಸಿದಾಗ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಮೂಲ ಪ್ರಮಾಣಪತ್ರಗಳು :</u>**

1. ವಿವಿಧ ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ / ಎಲ್ಲಾ ಸೆಮಿಸ್ಟರ್‌ಗಳ / ವರ್ಷಗಳ ಪ್ರಮಾಣಪತ್ರಗಳು ಅಥವಾ ಅಂಕಪಟ್ಟಿಗಳು.
2. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ /
3. ವಿವಿಧ ಮೀಸಲಾತಿಗಳನ್ನು ಕೋರಿದ್ದಲ್ಲಿ, ಮೀಸಲಾತಿ ಪ್ರಮಾಣಪತ್ರಗಳು.
4. ಸೇವಾನುಭವ ಪ್ರಮಾಣಪತ್ರ
5. ಕಂಪ್ಯೂಟರ್ ನಿರ್ವಹಣೆಯಲ್ಲಿ ಸಂಬಂಧಪಟ್ಟ ಹುದ್ದೆಗಳಿಗೆ ನಿಗದಿಪಡಿಸಿರುವಂತೆ ಜ್ಞಾನ ಹೊಂದಿರುವ ಪ್ರಮಾಣಪತ್ರಗಳು
6. ಅಭ್ಯರ್ಥಿಗಳು ಸಹಕಾರ ವಿಷಯದಲ್ಲಿ ಪದವಿ /ಸ್ನಾತಕೋತ್ತರ ಪದವಿ / ಡಿಪ್ಲೋಮಾ ಹೊಂದಿದ್ದಲ್ಲಿ ಸಂಬಂಧಿಸಿದ ಪ್ರಮಾಣ ಪತ್ರಗಳು / ಅಂಕಪಟ್ಟಿಗಳು
7. ಅಭ್ಯರ್ಥಿಗಳು ವ್ಯಾಸಂಗ ಮಾಡಿದ ವಿದ್ಯಾ ಸಂಸ್ಥೆಗಳಿಂದ ಪಡೆದ ನಡತೆ ಪ್ರಮಾಣಪತ್ರ.

**<u>ಮೀಸಲಾತಿ ಹಾಗೂ ವಯೋಮಿತಿ ರಿಯಾಯಿತಿ ಕೋರಿದಲ್ಲಿ ಹಾಜರುಪಡಿಸಬೇಕಾದ ಪ್ರಮಾಣಪತ್ರಗಳು :</u>**

1. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ ರವರಿಂದ ಪಡೆದಿರುವ ಪ್ರಮಾಣಪತ್ರ.
2. ಗ್ರಾಮೀಣ ಮೀಸಲಾತಿ ಪ್ರಮಾಣಪತ್ರ ನಮೂನೆ 2 ರಲ್ಲಿ
3. ಅಂಗವಿಕಲ ಅಭ್ಯರ್ಥಿಗಳು ನಿಗದಿಪಡಿಸಿದ ನಮೂನೆಯಲ್ಲಿ ಪಡೆದ ವೈದ್ಯಕೀಯ ಪ್ರಮಾಣಪತ್ರ

**<u>ಪ್ರಮುಖ ಸೂಚನೆಗಳು :</u>**

1. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಲಿಖಿತ ಪರೀಕ್ಷೆಗೆ ಅರ್ಹರೆ ಎಂಬುದನ್ನು ಪರಿಶೀಲಿಸಿ ಮೇಲು ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಲಿಖಿತ ಪರೀಕ್ಷೆಗೆ ಕರೆ ಪತ್ರಗಳನ್ನು ನೀಡುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಅನುಭವ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.
2. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ, ಅನುಭವ ಹಾಗೂ ವಯೋಮಿತಿ ಸಡಿಲಿಕೆ ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಅನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.
3. ಅಭ್ಯರ್ಥಿಗಳು ವಿದ್ಯಾರ್ಹತೆ, ಅನುಭವ, ಮೀಸಲಾತಿ, ವಯೋಮಿತಿ ಮುಂತಾದ ಅವಶ್ಯಕ ದಾಖಲೆಗಳನ್ನು ಸ್ವಯಂ ದೃಢೀಕರಿಸಿದ ಪ್ರತಿಗಳನ್ನು ಆನ್–ಲೈನ್‌ನಲ್ಲಿ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ.
   **ಅಪೂರ್ಣವಾಗಿರುವ, ಫೋಟೋ ಮತ್ತು ಅಭ್ಯರ್ಥಿಯು ಸಹಿ ಮಾಡದೇ ಇರುವ, ಅರ್ಜಿಗಳನ್ನು ತಿರಸ್ಕರಿಸಲಾಗುವುದು.**
4. ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬೇಕಾದಲ್ಲಿ ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ (No Objection Certificate) ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಪಡೆದು ಸಲ್ಲಿಸತಕ್ಕದ್ದು.
5. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.

**<u>ಪತ್ರ ವ್ಯವಹಾರ :</u>**

ಅಭ್ಯರ್ಥಿತ್ವದ ವಿಚಾರದಲ್ಲಿ ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ **(ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ)** ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆಗಳು

ಸಹಾಯವಾಣಿ (Helpline) **:08272–229691 / 224805**

**<u>ದುರ್ನಡತೆ :</u>**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸುತ್ತಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಸಂದರ್ಶನದಿಂದ / ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು. ಮುಂದೆ ಒಕ್ಕೂಟವು ನೇಮಕಾತಿ ಮಾಡುವ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

**ನಿರ್ಬಂಧ :**

1. ಯಾವುದೇ ನಿಷೇಧಿತ ಸಂಘ ಸಂಸ್ಥೆಯ ಸದಸ್ಯನಾಗಿರುವಲ್ಲಿ ಅಥವಾ ಸದಸ್ಯನಾಗಿದ್ದಲ್ಲಿ ಅಥವಾ ಯಾವುದೇ ನಿಷೇಧಿತ ಸಂಸ್ಥೆಯ ಕಾರ್ಯಚಟುವಟಿಕೆಯಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದಲ್ಲಿ.
2. ಭಾರತ ಸಂವಿಧಾನಕ್ಕೆ ಚ್ಯುತಿ ತರುವ ಕಾರ್ಯದಲ್ಲಿ ಪ್ರವರ್ತನಾದಲ್ಲಿ.
3. ಕಾನೂನು ಭಂಗ ಮಾಡಿ ಹಿಂಸಾಕೃತ್ಯದಲ್ಲಿ ತೊಡಗಿಕೊಂಡಿದ್ದಲ್ಲಿ.
4. ಭಾರತ ದೇಶದ ಸಾರ್ವಭೌಮ ಹಾಗೂ ಸುಭದ್ರತೆಗೆ ಧಕ್ಕೆ ತರುವ ಕಾರ್ಯದಲ್ಲಿ ತೊಡಗಿಕೊಂಡಿದ್ದಲ್ಲಿ.
5. ಭಾರತ ಸರ್ಕಾರದ ಅಥವಾ ಯಾವುದೇ ರಾಜ್ಯ ಸರ್ಕಾರದ ಸೇವೆಯಿಂದ ಉಚ್ಚಾಟನೆಗೊಂಡಿದ್ದಲ್ಲಿ,
6. ವ್ಯಕ್ತಿಯು ಕಾನೂನುಬಾಹಿರ ಕೃತ್ಯಗಳಲ್ಲಿ ತೊಡಗಿ ಅಪರಾಧಕ್ಕೆ ಒಳಗಾದ ಪ್ರಸಂಗಗಳಲ್ಲಿ, ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿಯು ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ವಿವಾಹವಾಗಿರುವ ಮಹಿಳಾ ಅಭ್ಯರ್ಥಿಯು ನೇಮಕಾತಿಗೆ ಅರ್ಹರಿರುವುದಿಲ್ಲ.

**–ಸಹಿ–**

**ಸದಸ್ಯ ಕಾರ್ಯದರ್ಶಿ ಹಾಗೂ**

**ಮುಖ್ಯಕಾರ್ಯನಿರ್ವಾಹಣಾಧಿಕಾರಿ,**

**ಕೊಡಗು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ.**

**ಮಡಿಕೇರಿ**